ದಿನಾಂಕ 16.09.2023 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣವಚನ ಭೋಧಿಸಲಾಯಿತು.

ಪಾಟೀ ಸವಾಲುಃ- 8 ನೇ ಪ್ರತಿವಾದಿ ಪರ ವಕೀಲರಾದ ಶ್ರೀ ಎ.ಎಂ.ಎಲ್ ರವರಿಂದಃ-

ಕೊಕ್ಕಂಡ ಕುಟುಂಬದಲ್ಲಿ ಒಟ್ಟು ಎಷ್ಟು ಕುಳಗಳಿವೆ ಎಂಬುವುದು ನನಗೆ ಗೊತ್ತಿಲ್ಲ. ಆದರೆ, ನಾನು 2 ನೇ ಕುಳಕ್ಕೆ ಸೇರಿದವನಾಗಿರುತ್ತೇನೆ. ಕುಳ ಸಂಖ್ಯೆ 2 ರಲ್ಲಿ ನಮ್ಮ ಆಸ್ತಿಗಳು ಪಾಲು ಆಗಿವೆ ಎಂದರೆ ಸರಿಯಲ್ಲ. 2 ನೇ ಪ್ರತಿವಾದಿಯ ಬಗ್ಗೆ ನನಗೆ ಮಾಹಿತಿ ಇರುವುದಿಲ್ಲ. 2 ನೇ ಪ್ರತಿವಾದಿಗೆ ಎಷ್ಟು ಜನ ಮಕ್ಕಳು ಇದ್ದಾರೆ ಎಂಬುದು ನನಗೆ ಗೊತ್ತಿಲ್ಲ. 2 ನೇ ಪ್ರತಿವಾದಿಯು 1962 ನೇ ಇಸವಿಯಲ್ಲಿ ಮೃತರಾಗಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. 2 ನೇ ಪ್ರತಿವಾದಿಗೆ ಐದು ಜನ ಗಂಡು ಮಕ್ಕಳು ಮತ್ತು 3 ಜನ ಹೆಣ್ಣು ಮಕ್ಕಳು ಎಂದರೆ ಸರಿ.

ಮುಂದುವರೆದ ಪಾಟೀ ಸವಾಲನ್ನು ಕೋರಿಕೆಯ ಮೇರೆಗೆ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿದಾರರ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ ಹೆ ಕೇ ಸ ಇ ಎ ಒ.

ಸಹಿಃ

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಃ ವಿರಾಜಪೇಟೆ.

(ಸಾಕ್ಷಿದಾರರ ಸಹಿ)